**All India Radio: Bangalore**
**National Bulletin In Kannada**
**21.02.2026 1.10 p.m.**
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
**21.02.2026 1.10 p.m.**
**<><><><>**

ಮುಖ್ಯಾಂಶಗಳು

1. ಬ್ರೆಜಿಲ್ ಅಧ್ಯಕ್ಷರೊಂದಿಗೆ ಪ್ರಧಾನಿ ನರೇಂದ್ರ ಮೋದಿ ದ್ವಿಪಕ್ಷೀಯ ಮಾತುಕತೆ
2. ಭಾರತೀಯ ನೌಕಾಪಡೆ ಆಯೋಜಿಸಿರುವ ಗೋವಾ ಕಡಲ ಸಮಾವೇಶ ಇಂದಿನಿಂದ ಆರಂಭ
3. ಮನ್ ಕಿ ಬಾತ್; ಭಾರತೀಯರನ್ನುದ್ದೇಶಿಸಿ ನಾಳೆ ಪ್ರಧಾನಿ ಮನದ ಮಾತು
4. ಐಸಿಸಿ ಟಿ-೨೦ ವಿಶ್ವಕಪ್ ಕ್ರಿಕೆಟ್; ಸೂಪರ್ ೮ರ ಉದ್ಘಾಟನಾ ಪಂದ್ಯದಲ್ಲಿಂದು ನ್ಯೂಜಿಲೆಂಡ್ - ಪಾಕಿಸ್ತಾನ ಮುಖಾಮುಖಿ

<><><><>

ನವದೆಹಲಿಯಲ್ಲಿಂದು ಪ್ರಧಾನಿ ನರೇಂದ್ರ ಮೋದಿ ಮತ್ತು ಬ್ರೆಜಿಲ್ ಅಧ್ಯಕ್ಷ ಲೂಯಿಸ್ ಇನಾಸಿಯೊ ಲುಲಾ ಡ ಸಿಲ್ವಾ ಅವರ ನಡುವಿನ ದ್ವಿಪಕ್ಷೀಯ ಮಾತುಕತೆ ಪ್ರಗತಿಯಲ್ಲಿದೆ. ಉಭಯ ದೇಶಗಳ ನಡುವೆ ಬಹುಪಕ್ಷೀಯ ವೇದಿಕೆಗಳಲ್ಲಿ ಸಹಕಾರ, ಸುಧಾರಿತ ಬಹುಪಕ್ಷೀಯತೆ, ಜಾಗತಿಕ ಆಡಳಿತ ಮತ್ತು ಜಾಗತಿಕ ದಕ್ಷಿಣಕ್ಕೆ ಸಂಬಂಧಿಸಿದ ಸಮಸ್ಯೆಗಳು ಸೇರಿದಂತೆ ಪರಸ್ಪರ ಆಸಕ್ತಿಯ ಪ್ರಾದೇಶಿಕ ಮತ್ತು ಜಾಗತಿಕ ವಿಷಯಗಳ ಕುರಿತು ಉಭಯ ನಾಯಕರು ಅಭಿಪ್ರಾಯಗಳನ್ನು ವಿನಿಮಯ ಮಾಡಿಕೊಳ್ಳುವ ಸಾಧ್ಯತೆ ಇದೆ. ಇದಕ್ಕೂ ಮುನ್ನ, ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್ ಅವರು ಬ್ರೆಜಿಲ್ ಅಧ್ಯಕ್ಷರನ್ನು ಭೇಟಿಯಾಗಿ ಮಾತುಕತೆ ನಡೆಸಿದರು. ಸಭೆಯಲ್ಲಿ ಭಾರತ - ಬ್ರೆಜಿಲ್ ನಡುವಿನ ಕಾರ್ಯತಂತ್ರ ಬಲಪಡಿಸುವ ನಿಟ್ಟಿನಲ್ಲಿ ಚರ್ಚೆ ನಡೆಸಲಾಯಿತು ಎಂದು ಸಾಮಾಜಿಕ ಜಾಲತಾಣದಲ್ಲಿ ಡಾ. ಎಸ್. ಜೈಶಂಕರ್ ತಿಳಿಸಿದ್ದಾರೆ.

<><><><>

ಭಾರತೀಯ ನೌಕಾಪಡೆಯು ಆಯೋಜಿಸಿರುವ ಗೋವಾ ಕಡಲ ಸಮಾವೇಶ ೨೦೨೬ ರ ಐದನೇ ಆವೃತ್ತಿಯು ಇಂದು ವೆರೆಮ್‌ನ ನೌಕಾಪಡೆಯ ಕಾಲೇಜಿನಲ್ಲಿ ಪ್ರಾರಂಭವಾಯಿತು. 'ಮಹಾಸಾಗರ ಪ್ರದೇಶ: ವಿಕಸಿಸುತ್ತಿರುವ ಕಡಲ ಸವಾಲುಗಳನ್ನು ಪರಿಹರಿಸುವುದು - ಕ್ರಿಯಾತ್ಮಕ

ಬೆದರಿಕೆಗಳನ್ನು ತಗ್ಗಿಸಲು ಪ್ರಗತಿಪರ ಪ್ರಯತ್ನಗಳು' ಎಂಬುದು ಈ ಸಮಾವೇಶದ ಧ್ಯೇಯವಾಕ್ಯವಾಗಿದೆ. ಸಮಾವೇಶದಲ್ಲಿ ಹಿಂದೂ ಮಹಾಸಾಗರ ಪ್ರದೇಶದಲ್ಲಿ ಉದಯೋನ್ಮುಖ ಕಡಲ ಸವಾಲುಗಳನ್ನು ನಿಭಾಯಿಸಲು ಸಹಕಾರಿ ಕಾರ್ಯವಿಧಾನಗಳು ಮತ್ತು ಪಾಲುದಾರಿಕೆಗಳನ್ನು ಬಲಪಡಿಸುವ ಬಗ್ಗೆ ಚರ್ಚೆಗಳು ಕೇಂದ್ರೀಕೃತವಾಗಿವೆ.

<><><>

ಆಕಾಶವಾಣಿಯ ಜನಪ್ರಿಯ ಮಾಸಿಕ ಕಾರ್ಯಕ್ರಮ 'ಮನ್ ಕಿ ಬಾತ್'ನಲ್ಲಿ ನಾಳೆ ಬೆಳಗ್ಗೆ ೧೧ ಗಂಟೆಗೆ ಪ್ರಧಾನಿ ನರೇಂದ್ರ ಮೋದಿ ಅವರು, ತಮ್ಮ ಮನದ ಮಾತನ್ನು ಹಂಚಿಕೊಳ್ಳಲಿದ್ದಾರೆ. ಇದು ಮನ್ ಕಿ ಬಾತ್ ಕಾರ್ಯಕ್ರಮದ ೧೩೧ನೇ ಆವೃತ್ತಿಯಾಗಿದೆ. ಈ ಕಾರ್ಯಕ್ರಮ ಆಕಾಶವಾಣಿ ಮತ್ತು ದೂರದರ್ಶನದ ಎಲ್ಲಾ ವಾಹಿನಿಗಳು, ಆಕಾಶವಾಣಿ ಸುದ್ದಿ ಜಾಲತಾಣ ಮತ್ತು ನ್ಯೂಸ್ ಆನ್ ಏರ್ ಮೊಬೈಲ್ ಅಪ್ಲಿಕೇಶನ್‌ನಲ್ಲಿ ಪ್ರಸಾರವಾಗಲಿದೆ.  ಈ ಕಾರ್ಯಕ್ರಮವನ್ನು ಆಕಾಶವಾಣಿ, ಡಿಡಿ ನ್ಯೂಸ್, ಪ್ರಧಾನಮಂತ್ರಿ ಕಚೇರಿ ಹಾಗೂ ಮಾಹಿತಿ ಮತ್ತು ಪ್ರಸಾರ ಸಚಿವಾಲಯದ ಯೂಟ್ಯೂಬ್ ಚಾನೆಲ್‌ಗಳಲ್ಲಿಯೂ ನೇರ ಪ್ರಸಾರ ಮಾಡಲಾಗುತ್ತದೆ. ಹಿಂದಿ ಪ್ರಸಾರದ ನಂತರ ಆಯಾ ಪ್ರಾದೇಶಿಕ ಭಾಷೆಗಳಲ್ಲಿ ಕಾರ್ಯಕ್ರಮ ಪ್ರಸಾರವಾಗಲಿದೆ.

<><><>

ದೀರ್ಘಕಾಲೀನ ಸೈಬರ್ ಭದ್ರತೆಯನ್ನು ಖಚಿತಪಡಿಸಿಕೊಳ್ಳಲು ನಾಗರಿಕ ಶಿಕ್ಷಣವನ್ನು ಅತ್ಯಗತ್ಯ ಅಂಶವಾಗಿ ಪರಿಗಣಿಸುವ ಅಗತ್ಯವಿದೆ ಎಂದು ಸುಪ್ರೀಂ ಕೋರ್ಟ್ ಮುಖ್ಯ ನ್ಯಾಯಮೂರ್ತಿ ಸೂರ್ಯಕಾಂತ್ ಅಭಿಪ್ರಾಯಪಟ್ಟಿದ್ದಾರೆ. ಜೈಪುರದ ರಾಜಸ್ತಾನ ಅಂತಾರಾಷ್ಟ್ರೀಯ ಕೇಂದ್ರದಲ್ಲಿ ನಡೆದ ಸೈಬರ್ ಭದ್ರತೆ - ಜಾಗೃತಿ, ರಕ್ಷಣೆ ಮತ್ತು ನ್ಯಾಯಕ್ಕೆ ಸಮಗ್ರ ಪ್ರವೇಶ ಕುರಿತ ಮೂರು ದಿನಗಳ ರಾಷ್ಟ್ರೀಯ ಸಮ್ಮೇಳನ ಉದ್ದೇಶಿಸಿ ಅವರು ಮಾತನಾಡಿದರು. ಸೈಬರ್ ಭದ್ರತೆಯು ಸಾಮೂಹಿಕ ಬದ್ಧತೆಯಾಗಿದ್ದು, ಈ ಸಂಕಲ್ಪವನ್ನು ಪೂರೈಸಲು ಸರ್ಕಾರ, ನ್ಯಾಯಾಂಗ ಮತ್ತು ಸಮಾಜ ಒಟ್ಟಾಗಿ ಕೆಲಸ ಮಾಡಬೇಕು. ಡಿಜಿಟಲ್ ಕ್ರಾಂತಿಯು ಅಪಾರ ಅನುಕೂಲಗಳನ್ನು ಒದಗಿಸಿದೆ. ಆಡಳಿತ, ಸೇವೆ ಮತ್ತು ಸಂವಹನವನ್ನು ಹಿಂದೆಂದಿಗಿಂತಲೂ ಸುಗಮಗೊಳಿಸುತ್ತಿದೆ. ಆದರೂ ಅದರ ದುರುಪಯೋಗವು ಒಂದು ಪ್ರಮುಖ ಸವಾಲಾಗಿದೆ ಎಂದು ಹೇಳಿದರು. ಸೈಬರ್ ಭದ್ರತೆಯು ಬ್ಯಾಂಕ್ ಖಾತೆಗಳನ್ನು ರಕ್ಷಿಸುವುದರ ಬಗ್ಗೆ ಮಾತ್ರವಲ್ಲದೆ, ಸಾಂಸ್ಥಿಕ ನಂಬಿಕೆಯನ್ನು ರಕ್ಷಿಸುವುದೂ ಆಗಿದೆ. ಈ ಬೆದರಿಕೆಯನ್ನು ಎದುರಿಸುವಲ್ಲಿ ಮತ್ತು ದೇಶದಲ್ಲಿ ಸೈಬರ್

ಅಪರಾಧವನ್ನು ತಡೆಗಟ್ಟುವಲ್ಲಿ ನ್ಯಾಯಾಂಗವು ತನ್ನ ಪಾತ್ರವನ್ನು ವಹಿಸುವಲ್ಲಿ ಯಾವುದೇ ಅವಕಾಶವನ್ನು ಬಿಡುವುದಿಲ್ಲ ಎಂದು ಸುಪ್ರೀಂ ಕೋರ್ಟ್ ಮುಖ್ಯ ನ್ಯಾಯಮೂರ್ತಿ ಸೂರ್ಯಕಾಂತ್ ತಿಳಿಸಿದರು.

<><><>

ಪ್ರಧಾನಿ ನರೇಂದ್ರ ಮೋದಿ ಅವರು ವಿಡಿಯೋ ಕಾನ್ಫರೆನ್ಸಿಂಗ್ ಮೂಲಕ ಇಂದು ಉತ್ತರ ಪ್ರದೇಶದ ಯಮುನಾ ಎಕ್ಸ್‌ಪ್ರೆಸ್‌ವೇ ಕೈಗಾರಿಕಾ ಅಭಿವೃದ್ಧಿ ಪ್ರಾಧಿಕಾರದಲ್ಲಿ ಎಚ್‌ಸಿಎಲ್-ಫಾಕ್ಸ್‌ಕಾನ್ ಜಂಟಿ ಉದ್ಯಮ ಯೋಜನೆಯ ಶಿಲಾನ್ಯಾಸ ನೆರವೇರಿಸಲಿದ್ದಾರೆ. ದೇಶೀಯ ಉತ್ಪಾದನಾ ಸಾಮರ್ಥ್ಯಗಳನ್ನು ಬಲಪಡಿಸಲು, ಆಮದು ಅವಲಂಬನೆಯನ್ನು ಕಡಿಮೆ ಮಾಡಲು ಮತ್ತು ಸ್ಥಿತಿಸ್ಥಾಪಕ ಜಾಗತಿಕ ಪೂರೈಕೆ ಸರಪಳಿಗಳನ್ನು ನಿರ್ಮಿಸಲು ಸರ್ಕಾರದ ಪ್ರಯತ್ನಗಳಿಗೆ ಈ ಯೋಜನೆ ಬಲ ನೀಡಲಿದೆ. ಈ ಉಪಕ್ರಮದೊಂದಿಗೆ, ದೇಶದ ಅರೆವಾಹಕ ಪರಿಸರ ವ್ಯವಸ್ಥೆಯು ಪ್ರಮುಖ ಉತ್ತೇಜನ ಪಡೆಯುತ್ತದೆ. ನಾವೀನ್ಯತೆ, ಕೌಶಲ್ಯ ಅಭಿವೃದ್ಧಿ ಮತ್ತು ತಂತ್ರಜ್ಞಾನ ವರ್ಗಾವಣೆಯನ್ನು ಇದು ಉತ್ತೇಜಿಸುತ್ತದೆ.

<><><>

ಪ್ರಧಾನಿ ನರೇಂದ್ರ ಮೋದಿ ಅವರು ಇಂದು ಉತ್ತರ ಪ್ರದೇಶದ ಮೀರತ್‌ಗೆ ಭೇಟಿ ನೀಡಲಿದ್ದಾರೆ. ಶತಾಬ್ದಿ ನಗರ ನಮೋ ಭಾರತ್ ನಿಲ್ದಾಣದಲ್ಲಿ ಮೀರತ್ ಮೆಟ್ರೋ ಮತ್ತು ನಮೋ ಭಾರತ್ ರೈಲಿಗೆ ಪ್ರಧಾನಿ ಚಾಲನೆ ನೀಡಲಿದ್ದಾರೆ. ಇದೇ ವೇಳೆ ಅವರು ಮೀರತ್ ದಕ್ಷಿಣ ನಿಲ್ದಾಣದವರೆಗೆ ಮೆಟ್ರೋ ರೈಲಿನಲ್ಲಿ ಪ್ರಯಾಣಿಸಲಿದ್ದಾರೆ. ತಮ್ಮ ಭೇಟಿಯ ಸಮಯದಲ್ಲಿ, ಪ್ರಧಾನಿ ಅವರು ಸುಮಾರು ೧೨ ಸಾವಿರದ ೯೩೦ ಕೋಟಿ ರೂಪಾಯಿ ಮೌಲ್ಯದ ವಿವಿಧ ಅಭಿವೃದ್ಧಿ ಯೋಜನೆಗಳನ್ನು ಲೋಕಾರ್ಪಣೆಗೊಳಿಸಲಿದ್ದಾರೆ. ೮೨ ಕಿಲೋಮೀಟರ್ ಉದ್ದದ ದೆಹಲಿ-ಮೀರತ್ ನಮೋ ಭಾರತ್ ಕಾರಿಡಾರ್ ಮತ್ತು ದೇಶದ ಮೊದಲ ನಮೋ ಭಾರತ್ ಪ್ರಾದೇಶಿಕ ಕ್ಷಿಪ್ರ ಸಾರಿಗೆ ವ್ಯವಸ್ಥೆಯ ಉಳಿದ ವಿಭಾಗಗಳನ್ನು ಅವರು ಉದ್ಘಾಟಿಸಲಿದ್ದಾರೆ.

<><><>

ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ನೂತನ ಜಾಗತಿಕ ಸುಂಕ ಆದೇಶವನ್ನು ಘೋಷಿಸಿದ ನಂತರ ಭಾರತ ತಾತ್ಕಾಲಿಕವಾಗಿ ಶೇಕಡಾ ೧೦ ರಷ್ಟು ಸುಂಕವನ್ನು ಎದುರಿಸಬೇಕಾಗುತ್ತದೆ ಎಂದು ಶ್ವೇತಭವನ ತಿಳಿಸಿದೆ. ಹೊಸ ಸುಂಕವು ಅಮೆರಿಕ ಸುಪ್ರೀಂ ಕೋರ್ಟ್ ರದ್ದುಗೊಳಿಸಿದ

ಹಿಂದಿನ ಅಂತಾರಾಷ್ಟ್ರೀಯ ತುರ್ತು ಆರ್ಥಿಕ ಅಧಿಕಾರ ಕಾಯ್ದೆ ಆಧಾರಿತ ಸುಂಕ ನಿಯಮಗಳನ್ನು ಬದಲಾಯಿಸುತ್ತದೆ. ಸೆಕ್ಷನ್ ೧೨೨ ರ ಅಡಿಯಲ್ಲಿ ಹೊಸದಾಗಿ ಘೋಷಿಸಲಾದ ಶೇಕಡಾ ೧೦ ರಷ್ಟು ಜಾಗತಿಕ ಸುಂಕವು ಭಾರತದ ಮೇಲೆ ಹಿಂದೆ ವಿಧಿಸಲಾದ ಐಇಇಪಿಎ ಸುಂಕಗಳಿಗೆ ಹೆಚ್ಚುವರಿ ಅಲ್ಲ. ಆದರೆ ಇದೀಗ ತಾತ್ಕಾಲಿಕವಾಗಿ ಶೇಕಡಾ ೧೦ ರಷ್ಟು ಸುಂಕ ಮಾತ್ರ ವಿಧಿಸಲಾಗುತ್ತದೆ ಎಂದು ಶ್ವೇತಭವನ ಸ್ಪಷ್ಟಪಡಿಸಿದೆ.

<><><>

ಪಶ್ಚಿಮ ಬಂಗಾಳದಲ್ಲಿ ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ ಸಂದರ್ಭದಲ್ಲಿ ಹಿಂಸಾಚಾರ ಮತ್ತು ರಾಜಕೀಯ ಹಸ್ತಕ್ಷೇಪದ ಬಗ್ಗೆ ಸುಪ್ರೀಂ ಕೋರ್ಟ್, ಪಶ್ಚಿಮ ಬಂಗಾಳದ ಪೊಲೀಸ್ ಮಹಾನಿರ್ದೇಶಕರಿಗೆ ಎಚ್ಚರಿಕೆ ನೀಡಿದೆ. ರಾಜಕೀಯ ನಾಯಕರ ಆಕ್ಷೇಪಾರ್ಹ ಹೇಳಿಕೆಗಳ ವಿರುದ್ಧ ಡಿಜಿಪಿ ಕ್ರಮ ಕೈಗೊಳ್ಳದಿದ್ದರೆ, ಭವಿಷ್ಯದಲ್ಲಿ ಡಿಜಿಪಿ ವಿರುದ್ಧ ಕ್ರಮ ಕೈಗೊಳ್ಳಲಾಗುವುದು ಎಂದು ನ್ಯಾಯಾಲಯ ಸ್ಪಷ್ಟಪಡಿಸಿದೆ. ಅಲ್ಲದೇ, ದೂರುಗಳಿಗೆ ಸಂಬಂಧಿಸಿದಂತೆ ಕೈಗೊಂಡಿರುವ ಕ್ರಮಗಳ ಕುರಿತು ಮುಂದಿನ ವಿಚಾರಣೆಯಲ್ಲಿ ವರದಿ ಸಲ್ಲಿಸುವಂತೆ ಸುಪ್ರೀಂ ಕೋರ್ಟ್ ಸೂಚಿಸಿದೆ.

<><><>

ನವದೆಹಲಿಯಲ್ಲಿ ಭಾರತ-ಎಐ ಇಂಪ್ಯಾಕ್ಟ್ ಶೃಂಗಸಭೆಯ ಸ್ಥಳದಲ್ಲಿ ನಿನ್ನೆ ಪ್ರತಿಭಟನೆ ನಡೆಸಿದ್ದಕ್ಕಾಗಿ ಕಾಂಗ್ರೆಸ್ ಪಕ್ಷವನ್ನು ಬಿಜೆಪಿ ಟೀಕಿಸಿದೆ. ನವದೆಹಲಿಯಲ್ಲಿಂದು ಮಾಧ್ಯಮಗಳನ್ನುದ್ದೇಶಿಸಿ ಮಾತನಾಡಿದ ಬಿಜೆಪಿ ವಕ್ತಾರ ಸುಧಾಂಶು ತ್ರಿವೇದಿ, ಇಡೀ ದೇಶವು ಕಾಂಗ್ರೆಸ್ ಪಕ್ಷದ ಕೃತ್ಯದಿಂದ ದುಃಖಿತವಾಗಿದೆ. ದೇಶದ ಜನರು ಅವರನ್ನು ಕ್ಷಮಿಸುವುದಿಲ್ಲ ಎಂದು ಹೇಳಿದರು. ಭಾರತ ಎಐ ಇಂಪ್ಯಾಕ್ಟ್ ಶೃಂಗಸಭೆ ಎಲ್ಲರಿಗೂ ಹೆಮ್ಮೆಯ ವಿಷಯವಾಗಿದೆ. ಆದರೆ ಕಾಂಗ್ರೆಸ್ ಪಕ್ಷದ ನಡೆಯು ಅತ್ಯಂತ ನಾಚಿಕೆಗೇಡಿನ ಸಂಗತಿ. ಕಾಂಗ್ರೆಸ್‌ನ ಕ್ರಮಗಳನ್ನು ಕೇವಲ ರಾಜಕೀಯ ಅಥವಾ ನಕಾರಾತ್ಮಕ ರಾಜಕೀಯ ಎಂದು ಕರೆಯಲು ಅಥವಾ ತಳ್ಳಿಹಾಕಲು ಸಾಧ್ಯವಿಲ್ಲ. ಈ ನಡವಳಿಕೆಯು ದೇಶಕ್ಕೆ ಅಗೌರವ ತೋರುವುದಕ್ಕೆ ಸಮಾನವಾಗಿದೆ ಎಂದು ಸುಧಾಂಶು ತ್ರಿವೇದಿ ದೂರಿದರು.

<><><>

೨೦೧೪ ರಲ್ಲಿ ಆರ್‌ಎಸ್‌ಎಸ್ ಕಾರ್ಯಕರ್ತರೊಬ್ಬರು ತಮ್ಮ ವಿರುದ್ಧ ಹೂಡಿದ್ದ ಮಾನನಷ್ಟ ಮೊಕದ್ದಮೆಯಲ್ಲಿ ಹೊಸದಾಗಿ ಜಾಮೀನು ಅರ್ಜಿ ಸಲ್ಲಿಸಲು ಹಿರಿಯ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಇಂದು ಮಹಾರಾಷ್ಟ್ರದ ಭಿವಂಡಿಯ ನ್ಯಾಯಾಲಯಕ್ಕೆ ಹಾಜರಾದರು. ಪ್ರಕರಣಕ್ಕೆ ಸಂಬಂಧಿಸಿದಂತೆ ಭಿವಂಡಿ ಮ್ಯಾಜಿಸ್ಟ್ರೇಟ್ ನ್ಯಾಯಾಲಯವು ಹೊಸದಾಗಿ ಜಾಮೀನು ಸಲ್ಲಿಸುವಂತೆ ರಾಹುಲ್ ಗಾಂಧಿಯವರಿಗೆ ಸೂಚಿಸಿತ್ತು. ಏಕೆಂದರೆ, ಅವರ ಜಾಮೀನುದಾರರಾಗಿ ಇದ್ದ ಮಾಜಿ ಕೇಂದ್ರ ಸಚಿವ ಶಿವರಾಜ್ ಪಾಟೀಲ್ ಕಳೆದ ವರ್ಷ ಡಿಸೆಂಬರ್‌ನಲ್ಲಿ ನಿಧನರಾದರು. ೨೦೧೪ ರಲ್ಲಿ ಸೋನಾಲೆ ಗ್ರಾಮದಲ್ಲಿ ನಡೆದ ಚುನಾವಣಾ ರ್‍ಯಾಲಿಯಲ್ಲಿ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಅವರು ಆರ್‌ಎಸ್‌ಎಸ್ ವಿರುದ್ಧ ಆಕ್ಷೇಪಾರ್ಹ ಹೇಳಿಕೆ ನೀಡಿದ್ದಾರೆ ಎಂದು ಆರೋಪಿಸಿ, ಆರ್‌ಎಸ್‌ಎಸ್ ಕಾರ್ಯಕರ್ತ ರಾಜೇಶ್ ಕುಂಟೆ ಎಂಬುವವರು ನ್ಯಾಯಾಲಯದಲ್ಲಿ ದೂರು ದಾಖಲಿಸಿದ್ದಾರೆ.

<><><><>

ಐಸಿಸಿ ಪುರುಷರ ಟಿ-೨೦ ವಿಶ್ವಕಪ್ ಕ್ರಿಕೆಟ್‌ನಲ್ಲಿಂದು ಸೂಪರ್ ೮ರ ಹಂತ ಆರಂಭವಾಗಲಿದೆ. ಉದ್ಘಾಟನಾ ಪಂದ್ಯದಲ್ಲಿ, ನ್ಯೂಜಿಲೆಂಡ್ ಇಂದು ಸಂಜೆ ಕೊಲಂಬೊದ ಆರ್.ಪ್ರೇಮದಾಸ ಕ್ರೀಡಾಂಗಣದಲ್ಲಿ ನಡೆಯುವ ಪಂದ್ಯದಲ್ಲಿ ಪಾಕಿಸ್ತಾನ ತಂಡವನ್ನು ಎದುರಿಸಲಿದೆ. ಪಂದ್ಯ ಭಾರತೀಯ ಕಾಲಮಾನ ಸಂಜೆ ೭ ಗಂಟೆಗೆ ಆರಂಭವಾಗಲಿದೆ. ಏತನ್ಮಧ್ಯೆ, ಭಾರತ ತಂಡ ನಾಳೆ ಅಹಮದಾಬಾದ್‌ನ ನರೇಂದ್ರ ಮೋದಿ ಕ್ರೀಡಾಂಗಣದಲ್ಲಿ ದಕ್ಷಿಣ ಆಫ್ರಿಕಾ ವಿರುದ್ಧ ತನ್ನ ಸೂಪರ್ ೮ರ ಅಭಿಯಾನ ಪ್ರಾರಂಭಿಸಲಿದೆ.

<><><><>

ಆಸ್ಟ್ರೇಲಿಯಾದ ಅಡಿಲೇಡ್‌ನ ಓವಲ್ ಕ್ರೀಡಾಂಗಣದಲ್ಲಿಂದು ನಡೆಯುವ ವನಿತಾ ಕ್ರಿಕೆಟ್ ಸರಣಿಯ ಮೂರನೇ ಮತ್ತು ಅಂತಿಮ ಟಿ-೨೦ ಪಂದ್ಯದಲ್ಲಿ ಭಾರತ ತಂಡ, ಆಸ್ಟ್ರೇಲಿಯಾ ಮಹಿಳಾ ತಂಡದ ವಿರುದ್ಧ ಸೆಣಸಾಟ ನಡೆಸಲಿದೆ. ಪಂದ್ಯ ಭಾರತೀಯ ಕಾಲಮಾನ ಸಂಜೆ ೭.೪೫ಕ್ಕೆ ಆರಂಭವಾಗಲಿದೆ. ಈಗಾಗಲೇ ಉಭಯ ತಂಡಗಳು ತಲಾ ಒಂದು ಪಂದ್ಯಗಳನ್ನು ಗೆದ್ದಿದ್ದು, ಸರಣಿ ಗೆಲುವಿಗೆ ಈ ಪಂದ್ಯ ನಿರ್ಣಾಯಕವಾಗಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>